**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | 777(868) |
| ಮಾನ್ಯ ಸದಸ್ಯರ ಹೆಸರು | ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15.12.2025 |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜೀವ ಗಾಂಧಿ ವಿಶ್ವವಿದ್ಯಾನಿಲಯ ಮೈಸೂರು ವಿಭಾಗದ ಪ್ರಾದೇಶಿಕ ಕಛೇರಿಯನ್ನು ಕರಾವಳಿ ಪ್ರಾದೇಶಿಕ ಕಛೇರಿ ಮಂಗಳೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಯೋಜನೆ ಯಾವ ಹಂತದಲ್ಲಿದೆ; ಇದರ ಕಾರ್ಯ ಪ್ರಾರಂಭಿಸಲಾಗಿದೆಯೇ: (ವಿವರ ನೀಡುವುದು) | ಮಂಗಳೂರಿನಲ್ಲಿ ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಪ್ರಾದೇಶಿಕ ಕಛೇರಿ ಕಟ್ಟಡ ನಿರ್ಮಾಣದ ಕಾಮಗಾರಿಯು ದಿನಾಂಕ: 17.01.2025 ರಿಂದ ಪ್ರಾರಂಭಗೊಂಡಿರುತ್ತದೆ. ಬೇಸ್ ಮೆಂಟ್ ಹಾಗೂ ನೆಲಮಹಡಿಯಲ್ಲಿನ ಎಲ್ಲಾ ರೀತಿಯ ಕಾಂಕ್ರೀಟ್ ಕೆಲಸಗಳು ಪೂರ್ಣಗೊಂಡಿದ್ದು, ಮೊದಲನೇ ಮಹಡಿಯ ಕೆಲಸಗಳು ಪ್ರಗತಿಯಲ್ಲಿರುತ್ತವೆ. |
| ಆ) | ಸದರಿ ಪ್ರಾದೇಶಿಕ ಕಛೇರಿ ಕಟ್ಟಡ ಎಂದು ಪೂರ್ಣಗೊಳ್ಳುವುದು, ಕಟ್ಟಡ ಪೂರ್ಣಗೊಳ್ಳುವವರೆಗೆ ಮಂಗಳೂರಿನಲ್ಲಿ ಆಡಳಿತಕ್ಕೆ ಸಂಬಂಧಪಟ್ಟ ಕಛೇರಿ ತೆರೆದು ಕಾರ್ಯ ಪ್ರಾರಂಭಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು? (ವಿವರ ನೀಡುವುದು) | ಸದರಿ ಪ್ರಾದೇಶಿಕ ಕಛೇರಿ ಕಟ್ಟಡ ಕಾಮಗಾರಿಯನ್ನು ಡಿಸೆಂಬರ್- 2026 ರ ಅಂತ್ಯಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿದೆ.<br>ಕಟ್ಟಡ ಪೂರ್ಣಗೊಳ್ಳುವವರೆಗೆ ಆಡಳಿತಾತ್ಮಕ ಕೆಲಸಗಳನ್ನು ಈ ಹಿಂದಿನಿಂದಲೂ ನಿರ್ವಹಿಸುತ್ತಿರುವಂತೆ ಮುಖ್ಯ ಕಛೇರಿಯಿಂದಲೇ ನಿರ್ವಹಿಸಲಾಗುವುದು. ಹಾಲಿ ಪ್ರಗತಿಯಲ್ಲಿರುವ ಕಾಮಗಾರಿಯ ಕೆಲಸಗಳು ಮತ್ತು ಒಳಾಂಗಣ ಕೆಲಸಗಳು (Interior Works) ಪೂರ್ಣಗೊಂಡ ನಂತರದಲ್ಲಿ ಕಛೇರಿಯನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ. |

ಸಂಖ್ಯೆ: ಎಂಇಡಿ 625 ಎಂಎಂಸಿ 2025

**(ಡಾ|| ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು